ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	621
ಸದಸ್ಯರ ಹೆಸರು	:	ಶ್ರೀ ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ	:	17.12.2021
ಉತ್ತರಿಸುವವರು	:	ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ಚನ್ನರಾಯಪಟ್ಟಣ ತಾಲ್ಲೂಕಿನ ಜಂಬೂರು ಗ್ರಾಮದಲ್ಲಿ ತಿಪ್ಪೆಗುಂಡಿಗಳ ವೈಜ್ಞಾನಿಕ ಹಾಗೂ ಆಧುನಿಕ ಸಂಸ್ಕರಣಾ ಘಟಕಗಳ ನಿರ್ಮಾಣ ಕಾಮಗಾರಿಗಳಿಗೆ ಅನುಮೋದನೆ ದೊರೆತಿದ್ದು, ಇಲ್ಲಿಯವರೆಗೆ ಕಾಮಗಾರಿಗಳನ್ನು ಪ್ರಾರಂಭಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು; ಮತ್ತು ಯಾವ ಕಾಲಮಿತಿಯೊಳಗೆ ಈ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು; (ವಿವರ ನೀಡುವುದು)	ಚನ್ನರಾಯಪಟ್ಟಣ ತಾಲ್ಲೂಕು ಜಂಬೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಜಂಬೂರು ಗ್ರಾಮದಲ್ಲಿ ನರೇಗಾ ಯೋಜನೆಯಡಿಯಲ್ಲಿ ಘನ ತ್ಯಾಜ್ಯ ವಿಲೇವಾರಿ ಘಟಕ ಕಾರ್ಯ ಪ್ರಗತಿಯಲ್ಲಿದ್ದು, ಮುಂದಿನ ಒಂದು ತಿಂಗಳೊಳಗೆ ಕಾಮಗಾರಿ ಪೂರ್ಣಗೊಳ್ಳಲಿದೆ. ಆದ್ದರಿಂದ ಮುಖ್ಯ ಮಂತ್ರಿ ಗ್ರಾಮ ವಿಕಾಸ ಯೋಜನೆಯಡಿಯಲ್ಲಿ ಅನುಮೋದನೆಯಾಗಿರುವ ತಿಪ್ಪೆಗುಂಡಿಗಳ ವೈಜ್ಞಾನಿಕ ಹಾಗೂ ಆಧುನಿಕ ಸಂಸ್ಕರಣಾ ಘಟಕ ಕಾಮಗಾರಿಯನ್ನು ಬದಲಾಯಿಸಿ ಅದರ ಬದಲು ಜಂಬೂರು ಗ್ರಾಮದಲ್ಲಿ ಚರಂಡಿ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮವಹಿಸಲಾಗುತ್ತಿದೆ.
(ಆ)	ಹಾಸನ ಜಿಲ್ಲೆಯ ಪಂಚಾಯ್ತಿಗಳ ವ್ಯಾಪ್ತಿಯಲ್ಲಿ ಪ್ರತಿನಿತ್ಯ ಎಷ್ಟು ಘನತ್ಯಾಜ್ಯ ಸಂಗ್ರಹವಾಗುತ್ತಿದೆ ಹಾಗೂ ಅದನ್ನು ವೈಜ್ಞಾನಿಕ ರೀತಿಯಲ್ಲಿ ಪುನರ್‌ಬಳಕೆ ಮಾಡಲು ಮತ್ತು ವಿಲೇವಾರಿ ಮಾಡಲು ಕೈಗೊಳ್ಳುತ್ತಿರುವ ಕ್ರಮಗಳೇನು;	ಹಾಸನ ಜಿಲ್ಲೆಯ 267 ಗ್ರಾಮ ಪಂಚಾಯತಿಗಳಲ್ಲಿ ಪ್ರತಿನಿತ್ಯ ಸುಮಾರು 25 ಟನ್‌ಗಳಷ್ಟು ಒಣ ತ್ಯಾಜ್ಯವು ಉತ್ಪತ್ತಿಯಾಗುತ್ತದೆ. ಪ್ರಸ್ತುತ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ತಾತ್ಕಾಲಿಕವಾಗಿ ಹಳೆ ಕಟ್ಟಡಗಳಲ್ಲಿ ಒಣ ತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಮಾಡಲಾಗುತ್ತಿದೆ. ಹಸಿ ತ್ಯಾಜ್ಯವನ್ನು ಮನೆಯ ಹಂತದಲ್ಲಿಯೇ ಸಂಪನ್ಮೂಲವಾಗಿ ಉಪಯೋಗವಾಗುತ್ತಿದೆ. ನರೇಗಾ ಯೋಜನೆಯಲ್ಲಿ ಗೊಬ್ಬರದ ಗುಂಡಿಗಳನ್ನು ಮಾಡಲು ಪ್ರೋತ್ಸಾಹಿಸಲಾಗುತ್ತಿದೆ
(ಇ)	ಹಾಸನ ಜಿಲ್ಲೆಯ ಯಾವುದೇ ಪಂಚಾಯಿತಿಗಳಲ್ಲೂ ತ್ಯಾಜ್ಯ ಸಂಸ್ಕರಣೆ ನಿಯಮ ಪಾಲನೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ?	ಹಾಸನ ಜಿಲ್ಲೆಯಲ್ಲಿ ಒಟ್ಟು 267 ಗ್ರಾಮ ಪಂಚಾಯತಿಗಳಿದ್ದು, ಈ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಘನ ತ್ಯಾಜ್ಯ ನಿರ್ವಹಣೆಗೆ ವಿಸ್ತೃತ ಕ್ರಿಯಾಯೋಜನೆ ಸಿದ್ಧಪಡಿಸಿ, ಅನುಮೋದನೆ ನೀಡಿ, ಈ ಪೈಕಿ 260 ಗ್ರಾಮ ಪಂಚಾಯತಿಗಳಿಗೆ ಅನುದಾನವನ್ನು ನಿಯಮಾನುಸಾರ ಮಂಜೂರಾತಿ ಮಾಡಲಾಗಿರುತ್ತದೆ. 267 ಗ್ರಾಮ ಪಂಚಾಯತಿಗಳಲ್ಲಿ ಕಸದ ಬುಟ್ಟಿಯನ್ನು ಮತ್ತು ಆಟೋ ಟಿಪ್ಪರ್ ಅನ್ನು ಖರೀದಿಸಲಾಗಿದ್ದು, ಈ ಎಲ್ಲಾ ಗ್ರಾಮ ಪಂಚಾಯಿತಿಗಳ ಹಳೇ ಕಟ್ಟಡಗಳಲ್ಲಿ ಒಣ ತ್ಯಾಜ್ಯ ಸಂಗ್ರಹಣೆ ಹಾಗೂ ವಿಲೇವಾರಿ ಕಾರ್ಯವನ್ನು ನಡೆಸಲಾಗುತ್ತಿದೆ. ಜಿಲ್ಲೆಯ 100 ಗ್ರಾಮ ಪಂಚಾಯಿತಗಳಲ್ಲಿ ಸ್ವಂತ ಕಟ್ಟಡಗಳನ್ನು (ಸ್ವಚ್ಛ

		ಸಂಕೀರ್ಣ ಘಟಕ) ಹೊಸದಾಗಿ ನಿರ್ಮಾಣ ಮಾಡಲಾಗಿದ್ದು, ಬಾಕಿ 167 ಗ್ರಾಮ ಪಂಚಾಯಿತಗಳಲ್ಲಿ ಸ್ವಚ್ಛ ಸಂಕೀರ್ಣ ಘಟಕಗಳ ಕಾಮಗಾರಿಗಳು ವಿವಿಧ ಹಂತದ ಪ್ರಗತಿಯಲ್ಲಿದ್ದು, ಶೀಘ್ರದಲ್ಲಿ ಪೂರ್ಣಗೊಳಿಸಲು ಕ್ರಮವಹಿಸಲಾಗಿದೆ.

(ಕೆ.ಎಸ್.ಈಶ್ವರಪ್ಪ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು